156

ಪ್ರ-72 (156)

(10)

**ಮಾನ್ಯ ವಿಧಾನ ಪರಿಷತ್ತ ಸದಸ್ಯರಾದ ಮಾನ್ಯ ಶ್ರೀ ಅರುಣ ಶಹಾಪೂರ ರವರ ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಪ್ರಶ್ನೆ:**

ಪ್ರೌಢ ಶಾಲಾ ಮುಖ್ಯ ಶಿಕ್ಷಕ ಮುಖ್ಯೋಪಧ್ಯಾಯರುಗಳಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹುದ್ದೆ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹುದ್ದೆಯ ವೃಂದಕ್ಕೆ ಪದೋನ್ನತಿ ನೀಡುವಲ್ಲಿ ಆಗಿರುವ ವಿಳಂಬದ ಕುರಿತು ಹಾಗೂ ಪದೋನ್ನತಿ ನೀಡಲು ಇರುವ ಸಮಸ್ಯೆಗಳನ್ನು ಸರಿಪಡಿಸಲು ಹಾಗೂ ಶೀಘ್ರವಾಗಿ ಪದೋನ್ನತಿ ನೀಡುವ ಪ್ರಕ್ರಿಯೆ ಪ್ರಾರಂಭಿಸಿ ಅರ್ಹ ಮುಖ್ಯಗುರುಗಳಿಗೆ ಪದೋನ್ನತಿ ನೀಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ**

ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಗ್ರೂಪ್-ಎ ಕಿರಿಯ ಶ್ರೇಣಿಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಹುದ್ದೆಗಳಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು -1957ರ (ನಿಯಮ 32ರಡಿ ಸ್ವತಂತ್ರ ಪ್ರಭಾರ) ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ಹಾಲಿ ಗ್ರೂಪ್-ಬಿ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳು ಒಳಗೊಂಡಂತೆ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದಲ್ಲಿ ಖಾಲಿ ಇದ್ದಂತಹ ಹುದ್ದೆಗಳಿಗೆ ನಿಯಮಾನುಸಾರ ಪದೋನ್ನತಿ ನೀಡಿ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 95 ಡಿಜಿಎಂ 2018 ದಿನಾಂಕ:31/01/2020ರಂದು ಆದೇಶಿಸಲಾಗಿದೆ.

**ಸಂಖ್ಯೆ: ಇಡಿ 14 ಪಿಡಿಬಿ 2020**

(ಎಸ್. ಸುರೇಶ್‌ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ
ಸಚಿವರು